# ಮುಖ್ಯ ಮಹಾನಗರ ದಂಡಾಧಿಕಾರಿಯವರ ನ್ಯಾಯಾಲಯ, ಬೆಂಗಳೂರು ನಗರ

## ಸಿ.ಸಿ.ನಂ. 29266/2018

| | |
|---|---|
| ಸಾಕ್ಷಿದಾರರ ಹೆಸರು : | ಸವಿನಯ ಬಿ.ಜೆ. |
| ಗಂಡನ ಹೆಸರು : | ಅವಿನಾಶ ದಯಾಳ್ |
| ವಯಸ್ಸು : | 36 ವರ್ಷ |
| ಉದ್ಯೋಗ : | ಪಿ.ಎಸ್.ಐ ಜೆ.ಪಿ. ನಗರ ಪೊಲೀಸ್ ಠಾಣೆ |
| ವಾಸ : | ದೇವರಚಿಕ್ಕನಹಳ್ಳಿ, ಬೆಂಗಳೂರು |

**ದಿನಾಂಕ 29/05/2025 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.**
**ದಂ.ಪ್ರ.ಸಂ.ಕಲಂ. 299 ರ ಅಡಿಯಲ್ಲಿ ಸಾಕ್ಷಿಯ ಹೇಳಿಕೆಃ**

1. ನಾನು ದಿನಾಂಕ 23/02/2017 ರಿಂದ 29/04/2021 ರವರೆಗೆ ತಿಲಕ್ ನಗರ ಪೊಲೀಸ್ ಠಾಣೆ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 24/12/2017 ರಂದು ಚಾಸಾ-6 ರವರಿಂದ ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಪಡೆದುಕೊಂಡಿರುತ್ತೇನೆ. ಅದೇ ದಿನ ಚಾಸಾ-1 ರವರು ತೋರಿಸಿದ ಕೃತ್ಯ ನಡೆದ ಸ್ಥಳದಲ್ಲಿ ಚಾಸಾ-2 ಮತ್ತು 3 ರವರ ಸಮಕ್ಷಮ ಪಂಚನಾಮೆ ಜರುಗಿಸಿರುತ್ತೇನೆ. ದಿನಾಂಕ 26/12/2017 ರಂದು ಚಾಸಾ-4 ಮತ್ತು 5 ರವರ ಹೇಳಿಕೆಗಳನ್ನು ದಾಖಲಿಸಿಕೊಂರುತ್ತೇನೆ. ದಿನಾಂಕ 07/01/2018 ರಂದು ಸಿಬ್ಬಂದಿಗಳು ಆರೋಪಿಯನ್ನು ನನ್ನ ಮುಂದೆ ಹಾಜರು ಪಡಿಸಿದ ಮೇರೆಗೆ ಆರೋಪಿಯ ವಿರುದ್ದ ದಸ್ತಗಿರಿ ಕ್ರಮ ಜರುಗಿಸಿ, ನ್ಯಾಯಾಲಯದಿಂದ ಪೊಲೀಸ್ ಬಂಧನಕ್ಕೆ ಪಡೆದುಕೊಂಡಿರುತ್ತೇನೆ.

3. ಆರೋಪಿ ಮಂಜುನಾಥ ಎನ್ನುವವರಿಗೆ ವಂಚಿಸಿದ್ದ ಕಾರನ್ನು ಮಾರಾಟ ಮಾಡಿದ್ದು, ದಿನಾಂಕ 10/01/2018 ರಂದು ಸದರಿ ಮಂಜುನಾಥ ರವರು ಠಾಣೆಗೆ

ಸ್ವತಃ ಹಾಜರಾಗಿ ಸದರಿ ಕಾರನ್ನು ಹಾಜರು ಪಡಿಸಿರುತ್ತಾರೆ. ಚಾಸಾ-4 ಮತ್ತು ಮತ್ತೊಬ್ಬ ಪಂಚರಾದ ಶಿವಪ್ರಕಾಶ ಎಂಬುವವರ ಸಮಕ್ಷಮ ಪೊಲೀಸ್ ಠಾಣೆಯ ಆವರಣದಲ್ಲಿ ಪಂಚನಾಮೆ ಮಾಡಿ ಸದರಿ ಕಾರನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ. ಆರೋಪಿಯ ಮುಂದುವರಿದ ಸ್ವಇಚ್ಛಾ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ. ದಿನಾಂಕ 15/01/2018 ರಂದು ಆರೋಪಿಯನ್ನು ನ್ಯಾಯಾಂಗ ಬಂಧನಕ್ಕಾಗಿ ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೇನೆ. ತನಿಖೆ ಪೂರ್ಣಗೊಂಡಿದ್ದರಿಂದ ದಿನಾಂಕ 08/02/2018 ರಂದು ಆರೋಪಿಯ ವಿರುದ್ದ ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದೇನೆ.

4. ಸಾಕ್ಷಿಯು ಸ್ಥಳ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದಾರೆ. **ಆದ್ದರಿಂದ ಸ್ಥಳ ಪಂಚನಾಮೆಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು**. ತಿಲಕ್ ನಗರ ಪೊಲೀಸ್ ಠಾಣೆಯ ಮೊ.ಸಂ.479/2017 ರಲ್ಲಿ ದಿನಾಂಕ 10/12/2017 ರಂದು ಫೋರ್ಡ್ ಫಿಯಸ್ಟಾ ಕಾರನ್ನು ಅಮಾನತ್ತು ಪಡಿಸಿಕೊಂಡ ಬಗ್ಗೆ ಪಂಚನಾಮೆಯ ದೃಡೀಕರಿಸಿದ ಪ್ರತಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದಾರೆ. **ಆದ್ದರಿಂದ ಅಮಾನತ್ತು ಪಂಚನಾಮೆಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ. ಕೇ. ಸ. ಇ.

(ರಂಗೇಗೌಡ ಸಿ.)
ಮು.ಮ.ದಂ.ನ್ಯಾ.ಬೆಂ.ನಗರ.